[illegible]

ವಿಷಯ: ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಹಾಯವಾಣಿ ಕೇಂದ್ರಗಳ ಕಾರ್ಯನಿರ್ವಹಣೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 80 ಇಕಾಅ 2012 (ಭಾಗ-1), ದಿನಾಂಕ: 26.04.2012
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
4. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 196 ನಾಸೇಖಾ 2012 ದಿನಾಂಕ: 03/04/2013.
5. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 79 Exp.12/2013, ದಿನಾಂಕ: 02/04/2013.
6. ಜಿಲ್ಲಾಧಿಕಾರಿಯವರ ಪತ್ರ ಸಂಖ್ಯೆ:ಎಡಿಎಂ(ಸಕಾಲ)ಸಿಆರ್:01/12-13, ದಿನಾಂಕ: 03.06.2013

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಕಾಲ ಸಹಾಯವಾಣಿ ಕೇಂದ್ರಗಳ ನಿರ್ವಹಣೆಗಾಗಿ ರೂ.4,08,010/- (ನಾಲ್ಕು ಲಕ್ಷದ ಎಂಟು ಸಾವಿರದ ಹತ್ತು ರೂಪಾಯಿಗಳು ಮಾತ್ರ)ವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (4) ರ ಸರ್ಕಾರದ ಆದೇಶದಲ್ಲಿ 176 ತಾಲ್ಲೂಕು ಮತ್ತು 30 ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸಲಾಗಿರುವ ಸಹಾಯವಾಣಿ ಕೇಂದ್ರಗಳ ಕಾರ್ಯ ನಿರ್ವಹಣಾ ಅವಧಿಯನ್ನು ಜುಲೈ 2013 ರ ಅಂತ್ಯದ ವರೆಗೆ ವಿಸ್ತರಿಸಲಾಗಿದೆ.

ಮೇಲೆ ಓದಲಾದ (5) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿದೆ.

ಮೇಲೆ ಓದಲಾದ (6) ರ ಜಿಲ್ಲಾಧಿಕಾರಿಯವರ ಪತ್ರದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು 5 ಸಹಾಯವಾಣಿ ಕೇಂದ್ರಗಳಿದ್ದು, ಈ ಕೇಂದ್ರಗಳಿಗೆ 2012ರ ಡಿಸೆಂಬರ್ ಮಾಹೆಯಲ್ಲಿ ಸಿಬ್ಬಂದಿಯನ್ನು ನೇಮಕಾತಿ ಮಾಡಲಾಗಿದೆ. ಈ ಸಿಬ್ಬಂದಿಗಳಿಗೆ ಜನವರಿ 2013ರಿಂದ ಜುಲೈ-2013ರ ವರೆಗೂ ವೇತನ ಪಾವತಿಸಬೇಕಾಗಿದ್ದು, 2013-14ನೇ ಸಾಲಿನ ಅನುದಾನದಲ್ಲಿ ಸಿಬ್ಬಂದಿ ವೇತನ ಹಾಗೂ ಏಪ್ರಿಲ್ 2013 ರಿಂದ ಜುಲೈ 2013 ರವರೆಗೆ ಲೇಖನ ಸಾಮಗ್ರಿಗಳಿಗಾಗಿ ಹಣ ಬಿಡುಗಡೆ ಮಾಡಲು ಕೋರಿರುತ್ತಾರೆ. ಅದರಂತೆ, ಈ ಕೆಳಕಂಡಂತೆ ಪಾವತಿಸಲು ಸರ್ಕಾರದಲ್ಲಿ ಪರಿಶೀಲಿಸಿದೆ.

| ಕ್ರಮ ಸಂಖ್ಯೆ. | ಜಿಲ್ಲೆಗಳ ಹೆಸರು | ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕುಗಳಲ್ಲಿ ಪ್ರಾರಂಭಿಸಿರುವ ಸಹಾಯವಾಣಿ ಕೇಂದ್ರಗಳ ಸಂಖ್ಯೆ | ಜನವರಿ 2013 ರಿಂದ ಜುಲೈ 2013 ರವರೆಗೆ ವೇತನಕ್ಕಾಗಿ ತಗಲುವ ವೆಚ್ಚ ಹಾಗೂ (ಲೇಖನ ಸಾಮಗ್ರಿಗಳ ವೆಚ್ಚ ಏಪ್ರಿಲ್ ನಿಂದ ಜುಲೈವರೆಗೆ) |
|---|---|---|---|
| 1. | 2 | 3 | 4 |
| 1. | ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ | 1+4 | ರೂ.10,000x5x7=3,50,000/-<br>ರೂ.2,000 x5x4=40,000/-<br>ರೂ.3,90,000/-ಗಳು |
| (ಮೂರು ಲಕ್ಷದ ತೊಂಭತ್ತು ಸಾವಿರ ರೂಪಾಯಿಗಳು ಮಾತ್ರ) | | | |

ಪ್ರತಿ ತಿಂಗಳ ಸಿಬ್ಬಂದಿ ವೇತನ ರೂ.10,000/- ಮತ್ತು ಲೇಖನ ಸಾಮಗ್ರಿಗಳಿಗಾಗಿ ರೂ.2,000/-ಗಳಾಗಿದ್ದು, ಒಟ್ಟು ರೂ.12,000/-ಗಳಾಗಿರುತ್ತದೆ. ಅದರಂತೆ ಜನವರಿ 2013 ರಿಂದ ಜುಲೈ 2013 ರವರೆಗೆ ಏಳು ತಿಂಗಳ ಅವಧಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿಯವರ ಕಛೇರಿಯನ್ನೊಳಗೊಂಡಂತೆ ಸ್ಥಾಪಿಸಲಾಗಿರುವ 05 ಸಹಾಯವಾಣಿ ಕೇಂದ್ರಗಳ ಕಾರ್ಯ ನಿರ್ವಹಣೆಗಾಗಿ ನಿರ್ವಹಣೆಗೆ ತಗಲುವ ವೆಚ್ಚ ರೂ. ಒಟ್ಟಾರೆ ರೂ.3,90,000/- (ಮೂರು ಲಕ್ಷದ ತೊಂಭತ್ತು ಸಾವಿರ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು "ಸಕಾಲ ಮಂಡಳಿ" ಯಿಂದ ಭರಿಸಲು ತೀರ್ಮಾನಿಸಿದೆ.

ಮೇಲೆ ಓದಲಾದ (5) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 122 ನಾಸೇಖಾ 2013,**
**ಬೆಂಗಳೂರು, ದಿನಾಂಕ: 11ನೇ ಜೂನ್ 2013.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮ ಜಿಲ್ಲೆಯ 5 ಸಹಾಯವಾಣಿ ಕೇಂದ್ರಗಳ ಕಾರ್ಯನಿರ್ವಹಣೆಗೆ ಜನವರಿ 2013ರಿಂದ ಜುಲೈ 2013ರ ವರೆಗೆ ಸಿಬ್ಬಂದಿ ವೇತನ ಹಾಗೂ ಏಪ್ರಿಲ್ 2013 ರಿಂದ ಜುಲೈ 2013 ರವರೆಗೆ ಲೇಖನ ಸಾಮಗ್ರಿಗಳಿಗಾಗಿ ತಗಲುವ ವೆಚ್ಚವನ್ನು ಈ ಕೆಳಕಂಡಂತೆ ಜಿಲ್ಲಾಧಿಕಾರಿಗಳ ಕಛೇರಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ. | ಜಿಲ್ಲೆಗಳ ಹೆಸರು | ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕುಗಳಲ್ಲಿ ಪ್ರಾರಂಭಿಸಿರುವ ಸಹಾಯವಾಣಿ ಕೇಂದ್ರಗಳ ಸಂಖ್ಯೆ | ಜನವರಿ 2013 ರಿಂದ ಜುಲೈ 2013 ರವರೆಗೆ ವೇತನಕ್ಕಾಗಿ ತಗಲುವ ವೆಚ್ಚ ಹಾಗೂ (ಲೇಖನ ಸಾಮಗ್ರಿಗಳ ವೆಚ್ಚ ಏಪ್ರಿಲ್ ನಿಂದ ಜುಲೈವರೆಗೆ) |
|---|---|---|---|
| 1 | 2 | 3 | 4 |
| 1 | ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ | 1+4 | ರೂ.10,000x5x7=3,50,000/-<br>ರೂ.2,000x5x4=40,000/-<br>ರೂ.3,90,000/-ಗಳು |
| (ಮೂರು ಲಕ್ಷದ ತೊಂಭತ್ತು ಸಾವಿರ ರೂಪಾಯಿಗಳು ಮಾತ್ರ) | | | |

.....3

ಸದರಿ ಆದೇಶವನ್ನು 2013-14 ನೇ ಸಾಲಿನ ಲೆಕ್ಕ ಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಲು ಹೊರಡಿಸಲಾಗಿದ್ದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಬಿಡುಗಡೆ ಆದ ಅನುದಾನವನ್ನು ಈ ಕೆಳಕಂಡಂತೆ ವಿನಿಯೋಗಿಸುವುದು (ಪ್ರತಿ ತಿಂಗಳ ವೆಚ್ಚ)

| ಲೇಖನ ಸಾಮಗ್ರಿ | ಸಿಬ್ಬಂದಿ ವೇತನ (ಗರಿಷ್ಠ ಇಬ್ಬರು) | ಒಟ್ಟು | ಷರಾ |
|---|---|---|---|
| ರೂ.2,000/-ಗಳು | ರೂ.10,000/-ಗಳು | ರೂ.12,000/-ಗಳು | ಸಹಾಯವಾಣಿ ಕೇಂದ್ರಗಳ ಪ್ರತಿ ಜಿಲ್ಲೆಯ ಹಾಗೂ ಪ್ರತಿ ತಾಲ್ಲೂಕಿನ ಪ್ರತಿ ತಿಂಗಳ ಕಾರ್ಯನಿರ್ವಹಣೆಗೆ |

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 79 ವೆಚ್ಚ-12/2013, ದಿನಾಂಕ: 18/3/2013 ರ ಸಹಮತಿಯಂತೆ, ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012 ಹಾಗೂ ಎಫ್.ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್.ವರಪ್ರಸಾದ ರೆಡ್ಡಿ)
ಆಡಳಿತಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.